# ಗುಲಬರ್ಗಾ ವಿಶ್ವವಿದ್ಯಾಲಯ, ಕಲಬುರಗಿ

ಪರೀಕ್ಷಾ ವಿಭಾಗ

"ಜ್ಞಾನ ಗಂಗಾ" ಕಲಬುರಗಿ-೫೮೫ ೧೦೬, ಕರ್ನಾಟಕ, ಭಾರತ.

ದೂರವಾಣಿ ಸಂಖ್ಯೆ: ೦೮೪೭೨-೨೬೩೨೦೩ ಫ್ಯಾಕ್ಸ್ : ೦೮೪೭೨-೨೬೩೨೦೨

ಇ-ಮೇಲ್: regegug@rediffmail.com


ಸಂಖ್ಯೆ: ಗುವಿಕ/ಪರೀಕ್ಷಾ/ಪಿ1(14)/2025-26/ 3339 ದಿನಾಂಕ: 17.03.2026.

## ಅಧಿಸೂಚನೆ

ವಿಷಯ: ಏಪ್ರಿಲ್/ಮೇ-2026 ರಲ್ಲಿ ಜರುಗಲಿರುವ ಸ್ನಾತಕೋತ್ತರ ಪ್ರಥಮ ಮತ್ತು ತೃತೀಯ ಸೆಮಿಸ್ಟರ್ ರೆಗ್ಯೂಲರ/ರಿಪಿಟರ್ಸ್ ಲಿಖಿತ ಪರೀಕ್ಷೆಗಳ ಬಗ್ಗೆ.

ಉಲ್ಲೇಖ: 1. GUK/ACA/Cal-PG/2025-26/1004 Date 05.03.2026.

2. ಮಾನ್ಯ ಕುಲಪತಿಗಳ ಅನುಮೋದನೆ ದಿನಾಂಕ: 11.03.2026.

*****

ಏಪ್ರಿಲ್/ಮೇ-2026 ರಲ್ಲಿ ಜರುಗಲಿರುವ ಸ್ನಾತಕೋತ್ತರ ಪ್ರಥಮ ಮತ್ತು ತೃತೀಯ ಸೆಮಿಸ್ಟರ್ ರೆಗ್ಯೂಲರ/ರಿಪಿಟರ್ಸ್ ಲಿಖಿತ ಪರೀಕ್ಷೆಗಳ ಪರೀಕ್ಷಾ ಶುಲ್ಕ ಅರ್ಜಿಗಳನ್ನು ಸ್ವೀಕರಿಸುವ ದಿನಾಂಕ ಹಾಗೂ ಪರೀಕ್ಷೆಗಳು ಪ್ರಾರಂಭವಾಗುವ ತಾತ್ಕಾಲಿಕ ವಿವರಗಳನ್ನು ಈ ಕೆಳಗಿನಂತೆ ಅಧಿಸೂಚಿಸಲಾಗಿದೆ.

### ಭಾಗ-1

| ಕ್ರ ಸಂ | ವಿವರಗಳು | MA/M.Com/LLM & P.G. Diploma Course I & III Semester | M.Sc/MA(Psy)/M.Ed/MJMC/ MLISC/MSW / M.P.Ed /P.G. Diploma Course I & III Semester |
|---|---|---|---|
| 1 | ಪರೀಕ್ಷಾ ಶುಲ್ಕ | ರೂ.1755/- | ರೂ.2335/- |
| 2 | ಅರ್ಜಿ ಸಂಸ್ಕರಣ ಶುಲ್ಕ | ರೂ.110/- | ರೂ.110/- |
| 3 | ಅಂಕಪಟ್ಟಿ ಶುಲ್ಕ | ರೂ. 150/- | ರೂ. 150/- |
| 4 | ಅರ್ಜಿ ತಪಾಸಣೆ ಶುಲ್ಕ | ರೂ. 20/- | ರೂ. 20/- |

### ಭಾಗ-2

| ಕ್ರ.ಸಂ. | ವಿವರಗಳು | ದಿನಾಂಕ |
|---|---|---|
| 1 | ವಿದ್ಯಾರ್ಥಿಗಳು ಆನ್‌ಲೈನ್ UUCMS ಪೋರ್ಟಲ್‌ನಲ್ಲಿ ಪರೀಕ್ಷಾ ಶುಲ್ಕದೊಂದಿಗೆ ಅರ್ಜಿ ಸಲ್ಲಿಸುವ ಕಡೆಯ ದಿನಾಂಕ (ದಂಡರಹಿತ) | 24.03.2026 ರಿಂದ 31.03.2026 |
| 2 | ವಿದ್ಯಾರ್ಥಿಗಳು ಆನ್‌ಲೈನ್ UUCMS ಪೋರ್ಟಲ್‌ನಲ್ಲಿ ಪರೀಕ್ಷಾ ಶುಲ್ಕದೊಂದಿಗೆ ಅರ್ಜಿ ಸಲ್ಲಿಸುವ ಕಡೆಯ ದಿನಾಂಕ (ದಂಡ ಸಹಿತ ರೂ. 100/-) | 01.04.2026 ರಿಂದ 04.04.2026 |
| 3 | ವಿದ್ಯಾರ್ಥಿಗಳು ಆನ್‌ಲೈನ್ UUCMS ಪೋರ್ಟಲ್‌ನಲ್ಲಿ ಪರೀಕ್ಷಾ ಶುಲ್ಕದೊಂದಿಗೆ ಅರ್ಜಿ ಸಲ್ಲಿಸುವ ಕಡೆಯ ದಿನಾಂಕ (ದಂಡ ಸಹಿತ ರೂ. 750/-) | 05.04.2026 ರಿಂದ 08.04.2026 |
| 4 | ಪ್ರಾಂಶುಪಾಲರುಗಳು ವಿದ್ಯಾರ್ಥಿಗಳ ಪರೀಕ್ಷಾ ಅರ್ಜಿಗಳ ಮಾಹಿತಿಯನ್ನು (Students List ) ವಿಶ್ವವಿದ್ಯಾಲಯದ ಪರೀಕ್ಷಾ ವಿಭಾಗಕ್ಕೆ ಸಲ್ಲಿಸುವ ಕೊನೆಯ ದಿನಾಂಕ | 09.04.2026 |
| 5 | ಆಂತರಿಕ ಅಂಕಗಳನ್ನು UUCMS ಪೋರ್ಟಲ್ ಮೂಲಕ ಸಲ್ಲಿಸುವ ಕೊನೆಯ ದಿನಾಂಕ | 10.04.2026 |
| 6 | ಪರೀಕ್ಷಾ ಪ್ರವೇಶ ಪತ್ರಗಳನ್ನು (Hall Ticket) UUCMS ಪೋರ್ಟಲನಿಂದ ಪಡೆಯಲು ಪ್ರಾರಂಭಿಸುವ ದಿನಾಂಕ | 11.04.2026 ರಿಂದ 15.04.2026 |
| 7 | ಲಿಖಿತ ಪರೀಕ್ಷೆಗಳು ಪ್ರಾರಂಭವಾಗುವ ದಿನಾಂಕ | 15.04.2026 ರಿಂದ 30.04.2026 |
| 8 | ಪ್ರಾಯೋಗಿಕ ಪರೀಕ್ಷೆಗಳ ದಿನಾಂಕ | 01.05.2026 ರಿಂದ 15.05.2026 |

## ಸೂಚನೆಗಳು

1. ಏಪ್ರಿಲ್/ಮೇ–2026 ರ ಪರೀಕ್ಷಾ ಅರ್ಜಿಗಳನ್ನು ಆನಲೈನ್ ಮೂಲಕ ಮಾತ್ರ ಪಡೆಯಬಹುದಾಗಿದ್ದು, ಯಾವುದೇ ಕಾರಣಕ್ಕೂ ಮ್ಯಾನವಲ್ ಅರ್ಜಿಗಳನ್ನು ನೀಡುವುದಿಲ್ಲ.
2. ಯಾವುದೇ ಕಾರಣಕ್ಕೂ ಪರೀಕ್ಷಾ ಕೇಂದ್ರದ ಬದಲಾವಣೆಗೆ ಅವಕಾಶವಿರುವದಿಲ್ಲ.
3. ಒಮ್ಮೆ ಪಾವತಿಸಲಾದ ಪರೀಕ್ಷಾ ಶುಲ್ಕವನ್ನು ಯಾವುದೇ ಕಾರಣಕ್ಕೂ ಮರುಪಾವತಿ ಮಾಡಲಾಗುವುದಿಲ್ಲ ಹಾಗೂ ಅದನ್ನು ಮುಂದಿನ ಪರೀಕ್ಷೆಗಳಿಗೆ ಸರಿದೂಗಿಸಿಕೊಳ್ಳಲಾಗುವುದಿಲ್ಲ ಮತ್ತು,ಇಂತಹ ವಿಷಯಗಳಿಗೆ ಪತ್ರ ವ್ಯವಹಾರಕ್ಕೆ ಅವಕಾಶವಿರುವುದಿಲ್ಲ.
4. ಯಾವುದೇ ಪರಿಸ್ಥಿತಿಯಲ್ಲಿ ಅಧಿಸೂಚನೆಯಲ್ಲಿ ನಿಗದಿಪಡಿಸಿ ತಿಳಿಸಿದ ಕೊನೆಯ ದಿನಾಂಕ ಮುಗಿದ ನಂತರ ಬಂದಂತಹ ಅರ್ಜಿಗಳನ್ನು ಸ್ವೀಕರಿಸಲಾಗುವುದಿಲ್ಲ ಮತ್ತು ಯಾವುದೇ ಕಾರಣಕ್ಕಾಗಿ ಪರೀಕ್ಷೆಗಳು ಮುಂದೂಡಿದಲ್ಲಿ ಶುಲ್ಕ ಪಾವತಿಸುವ ದಿನಾಂಕಗಳು ಬದಲಾವಣೆಯಾಗುವುದಿಲ್ಲ.
5. ವಿಶ್ವವಿದ್ಯಾಲಯ ನಿಗದಿಪಡಿಸಿದ ಪರೀಕ್ಷಾ ಅರ್ಜಿ ತಪಾಸಣೆ ಶುಲ್ಕ ರೂ.20/– ರಲ್ಲಿ ವಿದ್ಯಾರ್ಥಿಗಳ ರೂ.10/–ನ್ನು ಪರೀಕ್ಷಾಂಗ ವಿಭಾಗ ಗುಲಬರ್ಗಾ ವಿಶ್ವವಿದ್ಯಾಲಯ, ಕಲಬುರಗಿ ಇವರಿಗೆ ಪಾವತಿಸಬೇಕು. ಉಳಿದ ರೂ.10/–ನ್ನು ತಮ್ಮ ಕಾಲೇಜಿನ ಪ್ರಾಂಶುಪಾಲರ ಬ್ಯಾಂಕ್ ಖಾತೆಗೆ ಪಾವತಿಸಬೇಕು.
6. ಅಭ್ಯರ್ಥಿಗಳು ಪರೀಕ್ಷೆಯಲ್ಲಿ ತಮ್ಮ ಉತ್ತರಗಳನ್ನು ಕೇವಲ ಇಂಗ್ಲೀಷ ಇಲ್ಲವೆ ಕನ್ನಡ ಮಾಧ್ಯಮದಲ್ಲಿ ಮಾತ್ರ ಬರೆಯಲು ಅವಕಾಶವಿದೆ. ಉಳಿದ ಭಾಷೆಗಳಲ್ಲಿ ಬರೆಯತಕ್ಕದ್ದಲ್ಲ ಎಂಬುದನ್ನು ಪ್ರಾಂಶುಪಾಲರು ಅಭ್ಯರ್ಥಿಗಳ ಗಮನಕ್ಕೆ ತರಬೇಕು. ವಿದ್ಯಾರ್ಥಿಗಳು ಇಂಗ್ಲೀಷ ಇಲ್ಲವೆ ಕನ್ನಡ ಮಾಧ್ಯಮದಲ್ಲಿ ಬರೆಯದೇ ಬೇರೆ ಮಾಧ್ಯಮದಲ್ಲಿ ಬರೆದರೆ ಅಂತಹ ವಿದ್ಯಾರ್ಥಿಗಳ ಉತ್ತರ ಪತ್ರಿಕೆಗಳು ಮೌಲ್ಯಮಾಪನವಾಗದೇ ಉಳಿಯುತ್ತವೆ. ಅಂಥಹ ವಿದ್ಯಾರ್ಥಿಗಳ ಪರೀಕ್ಷಾ ಫಲಿತಾಂಶವನ್ನು ಅನೂರ್ಜಿತಗೊಳಿಸಲಾಗುವುದೆಂದು ಅಭ್ಯರ್ಥಿಗಳಿಗೆ ಮನವರಿಕೆ ಮಾಡಿಕೊಡಬೇಕು. ಇದು ಭಾಷಾ ವಿಷಯಗಳಿಗೆ ಅನ್ವಯವಾಗುವುದಿಲ್ಲ.
7. ಎಲ್ಲಾ ಸ್ನಾತಕೋತ್ತರ ವಿಭಾಗದ ಮುಖ್ಯಸ್ಥರು, ಸಂಯೋಜಕರು, ವಿಶೇಷಾಧಿಕಾರಿಗಳು, ಸ್ನಾತಕೋತ್ತರ ಪದವಿ ಮಹಾವಿದ್ಯಾಲಯಗಳ ಪ್ರಾಂಶುಪಾಲರುಗಳಿಗೆ ತಮ್ಮ ಕಚೇರಿಯ ಸಿಬ್ಬಂದಿಗಳಿಗೆ ಹಾಗೂ ವಿದ್ಯಾರ್ಥಿಗಳಿಗೆ ಈ ಅಧಿಸೂಚನೆಯಲ್ಲಿ ತಿಳಿಸಿದ ಎಲ್ಲಾ ಸೂಚನೆಗಳನ್ನು ಕಟ್ಟುನಿಟ್ಟಾಗಿ ಪಾಲಿಸಿ, ವಿಶ್ವವಿದ್ಯಾಲಯದ ಪರೀಕ್ಷೆಗಳಿಗೆ ಯಾವುದೇ ತೊಂದರೆಯಾಗದಂತೆ ನೋಡಿಕೊಳ್ಳುವ ಹೊಣೆಗಾರಿಕೆ ಅವರದ್ದಾಗಿದೆ ಎಂಬುದು ಮನವರಿಕೆ ಮಾಡಿಕೊಡಲು ಸೂಚಿಸಲಾಗಿದೆ.
8. ರಿಪೀಟರ್ ವಿದ್ಯಾರ್ಥಿಗಳಿಗೆ ಯಾವುದೇ ಪರೀಕ್ಷೆಯನ್ನು ಮರು ಅವಕಾಶದಲ್ಲಿ (ರಿಪಿಟರ್ಸ್) ಬರೆಯುತ್ತಿದ್ದರೆ ಒಂದರಿಂದ ಮೂರರವರೆಗಿನ ಪ್ರತಿ ಪತ್ರಿಕೆಗೆ (ಪರೀಕ್ಷಾ ಶುಲ್ಕ without Practical) 300/- ಹಾಗೂ (With Practical) ಶುಲ್ಕ ರೂ. 500/– ಅದಕಿಂತ ಹೆಚ್ಚಿನ ಪತ್ರಿಕೆಗಳಲ್ಲಿ ಪೂರ್ಣಶುಲ್ಕ ಪಾವತಿಸತಕ್ಕದ್ದು.

ಕುಲಸಚಿವರು (ಮೌಲ್ಯಮಾಪನ)
ಗುಲಬರ್ಗಾ ವಿಶ್ವವಿದ್ಯಾಲಯ, ಕಲಬುರಗಿ.

ಗೆ,
ಗುಲಬರ್ಗಾ ವಿಶ್ವವಿದ್ಯಾಲಯ ವ್ಯಾಪ್ತಿಯ ಎಲ್ಲಾ ಸ್ನಾತಕೋತ್ತರ ವಿಭಾಗದ ಮುಖ್ಯಸ್ಥರು, ಸಂಯೋಜಕರು, ವಿಶೇಷಾಧಿಕಾರಿಗಳು, ಸ್ನಾತಕೋತ್ತರ ಪದವಿ ಮಹಾವಿದ್ಯಾಲಯಗಳ ಪ್ರಾಂಶುಪಾಲರುಗಳಿಗೆ ಮಾಹಿತಿ ಹಾಗೂ ಸೂಕ್ತ ಕ್ರಮಕ್ಕಾಗಿ.

ಪ್ರತಿಗಳು:

1. ವಿತ್ತಾಧಿಕಾರಿಗಳು, ಗುಲಬರ್ಗಾ ವಿಶ್ವವಿದ್ಯಾಲಯ, ಕಲಬುರಗಿ.
2. ಸರಕಾರಿ ಲೆಕ್ಕ ಪರಿಶೋಧಕರು, ಗುಲಬರ್ಗಾ ವಿಶ್ವವಿದ್ಯಾಲಯ, ಕಲಬುರಗಿ.
3. ಮಾನ್ಯ ಕುಲಪತಿಗಳ ಆಪ್ತ ಕಾರ್ಯದರ್ಶಿಗಳು / ಕುಲಸಚಿವರು / ಕುಲಸಚಿವರು(ಮೌಲ್ಯಮಾಪನ) ಅವರ ಆಪ್ತ ಸಹಾಯಕರು, ಗುಲಬರ್ಗಾ ವಿಶ್ವವಿದ್ಯಾಲಯ, ಕಲಬುರಗಿ.
4. ಗುಲಬರ್ಗಾ ವಿಶ್ವವಿದ್ಯಾಲಯದ ಪರೀಕ್ಷಾ ವಿಭಾಗದ ಎಲ್ಲಾ ಶಾಖೆಗಳ ವಿಶೇಷಾಧಿಕಾರಿಗಳು, ಸ್ನಾತಕೋತ್ತರ/ಸ್ನಾತಕ ಇವರ ಮಾಹಿತಿಗಾಗಿ.
5. ವಿಶೇಷಾಧಿಕಾರಿಗಳು, ವಿದ್ಯಾಮಂಡಲ ವಿಭಾಗ, ಗುಲಬರ್ಗಾ ವಿಶ್ವವಿದ್ಯಾಲಯ, ಕಲಬುರಗಿ ರವರ ಮಾಹಿತಿಗಾಗಿ.
6. ನೋಡಲ್ ಅಧಿಕಾರಿಗಳು UUCMS ಗುಲಬರ್ಗಾ ವಿಶ್ವವಿದ್ಯಾಲಯ, ಕಲಬುರಗಿ ರವರ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ
7. ಉಗ್ರಾಣ ಪಾಲಕರು, ಉಗ್ರಾಣ ಶಾಖೆ, ಪರೀಕ್ಷಾ ವಿಭಾಗ, ಗುಲಬರ್ಗಾ ವಿಶ್ವವಿದ್ಯಾಲಯ, ಕಲಬುರಗಿ
8. ಜಿಲ್ಲಾ ಸಮಾಜಕಲ್ಯಾಣ / ಹಿಂದುಳಿದ ವರ್ಗ& ಅಲ್ಪಸಂಖ್ಯಾತರ ಇಲಾಖೆಗಳಿಗೆ.
9. ಜಂಟಿ ನಿರ್ದೇಶಕರು, ಪ್ರಾದೇಶಿಕ ಕಾಲೇಜು ಶಿಕ್ಷಣ ಇಲಾಖೆ, ಕಲಬುರಗಿ ವಿಭಾಗ.
10. ಗಣಕಯಂತ್ರ, ಪರೀಕ್ಷಾ ಶಾಖೆ, ಗುಲಬರ್ಗಾ ವಿಶ್ವವಿದ್ಯಾಲಯ, ಕಲಬುರಗಿ, ಈ ಅಧಿಸೂಚನೆಯನ್ನು ವೆಬ್‌ಸೈಟ್‌ನಲ್ಲಿ ಪ್ರಕಟಿಸಲು ಸೂಚಿಸಲಾಗಿದೆ.
11. ಕುಲಸಚಿವರು (ಮೌಲ್ಯಮಾಪನ) ಆಪ್ತ ಸಹಾಯಕರಿಗೆ, ಗುಲಬರ್ಗಾ ವಿಶ್ವವಿದ್ಯಾಲಯ, ಕಲಬುರಗಿ ರವರ ಮಾಹಿತಿಗಾಗಿ.